# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1089
ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ
ಉತ್ತರಿಸಬೇಕಾದ ದಿನಾಂಕ : 23.02.2024
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಸತಿ ಶಿಕ್ಷಣ ಸಂಸ್ಥೆಗಳ ಅಡಿಯಲ್ಲಿ ಬರುವ (ಕ್ರೈಸ್) ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಸರ್ಕಾರಿ ನೌಕರರಿಗೆ ನೀಡಲಾಗುವ ಡಿ.ಸಿ.ಆರ್.ಜಿ. ಜ್ಯೋತಿ ಸಂಜೀವಿನಿ ಮುಂತಾದ ಸೌಲಭ್ಯಗಳನ್ನು ಒದಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಧ ಅಧೀನದಲ್ಲಿ ಪರಿಶಿಷ್ಟ ಜಾತಿ- 503 , ಪರಿಶಿಷ್ಟ ವರ್ಗ-156 ಮತ್ತು ಹಿಂದುಳಿದ ವರ್ಗ-174 ಒಟ್ಟು 833 ವಸತಿ ಶಾಲಾ/ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ಶಾಲೆಗಳಲ್ಲಿ 6403 ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ಸಿಬ್ಬಂದಿಗಳಿಗೆ ಒದಗಿಸಲಾಗುತ್ತಿರುವ ಸೇವಾ ಸೌಲಭ್ಯದ ವಿವರಗಳು ಈ ಕೆಳಕಂಡಂತಿದೆ.<br>**ಡಿ. ಸಿ. ಆರ್. ಜಿ**<br>6ನೇ ವೇತನ ಆಯೋಗದ ಶಿಫಾರಸ್ಸಿನನ್ವಯ ದಿನಾಂಕ: 01-04-2006ರಂದು ಮತ್ತು ನಂತರ ಸರ್ಕಾರಿ ಸೇವೆಗೆ ನೇಮಕ ಹೊಂದಿರುವ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಈ ಹಿಂದೆ ಇದ್ದ ಇಡಿಗಂಟಿನ ಪರಿಹಾರ ಸೌಲಭ್ಯವನ್ನು ಹಿಂಪಡೆದು, ಸರ್ಕಾರ ಆದೇಶ ಸಂಖ್ಯೆ:ಆಇ 34 ಪಿಇಎನ್ 2018 ದಿನಾಂಕ: 23.06.2018 ರ ಮೂಲಕ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ಜಾರಿಗೊಳಿಸಲಾಗಿದೆ. ಈ ಆದೇಶವು ನೂತನ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಎಂದು ಸ್ಪಷ್ಟವಾಗಿ ತಿಳಿಸಿರುವುದರಿಂದ ಸದರಿ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯವಾಗುವುದಿಲ್ಲ. ಆದುದರಿಂದ. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಸಂಘದ ನೌಕರರಿಗೆ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯ ವಿಸ್ತರಿಸಲು ಸಾಧ್ಯವಿಲ್ಲವೆಂದು ಆರ್ಥಿಕ ಇಲಾಖೆ ಹಿಂಬರಹ ನೀಡಿರುತ್ತದೆ.<br>ಮುಂದುವರೆದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ನೌಕರರಿಗೆ DCRG ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿದ್ದು, ಅಂತಿಮ ನಿರ್ಣಯವಾಗುವವರೆಗೆ ಸಂಘದ ಅಧೀನದ ಸೇವಾನಿರತ ಖಾಯಂ ಸಿಬ್ಬಂದಿಗಳು ಆಕಾಲಿಕ ಮರಣ ಹೊಂದಿದ್ದಲ್ಲಿ ಅಂತಹ ಸಿಬ್ಬಂದಿಗಳ ಅವಲಂಬಿತ ಕುಟುಂಬದವರಿಗೆ ರೂ.5.00/- ಲಕ್ಷಗಳ ಪರಿಹಾರ ಧನವನ್ನು ಪಾವತಿಸಲು ಆದೇಶಿಸಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಸದರಿ ಸೌಲಭ್ಯ ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | |

| | | |
|---|---|---|
| | | **ಜ್ಯೋತಿ ಸಂಜೀವಿನಿ :**<br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ವತಿಯಿಂದ ಅನುಷ್ಠಾನಗೊಳಿಸಲು ವಾರ್ಷಿಕವಾಗಿ ರೂ.4.5 ಕೋಟಿಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಒದಗಿಸಲಾಗುವ ನಿರ್ವಹಣಾ ವೆಚ್ಚದಿಂದ ಭರಿಸಿ ಪಾವತಿಸಲು ಅನುಮತಿ ನೀಡಿ ಆದೇಶಿಸಲಾಗಿದೆ. ಅದರಂತೆ ಕಾರ್ಯಕಾರಿ ನಿರ್ದೇಶಕರು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ ಬೆಂಗಳೂರು ರವರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ವಿಸ್ತರಿಸಲು ಕೋರಿ ಪತ್ರ ಬರೆಯಲಾಗಿದೆ. |
| **ಇ)** | ಪದವಿಪೂರ್ವ ಕಾಲೇಜುಗಳಲ್ಲಿ ಹಿಂದಿ ಉಪನ್ಯಾಸಕರ ಹಾಗೂ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಎಂದಿನಿಂದ ಸೃಜಿಸಲಾಗುವುದು; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿನ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ (Science Method) ತರಗತಿಗಳನ್ನು ನಡೆಸಲಾಗುತ್ತಿದ್ದು, ಸಂಘದ ವಿಜ್ಞಾನ ಕಾಲೇಜುಗಳಿಗೆ ಕನ್ನಡ ಮತ್ತು ಆಂಗ್ಲಭಾಷಾ ವಿಷಯವನ್ನು ನಿಗಧಿಪಡಿಸಿ ಹುದ್ದೆಗಳನ್ನು ಮಂಜೂರು ಮಾಡಲಾಗಿರುತ್ತದೆ. ಹಿಂದಿ ವಿಷಯವನ್ನು ಭಾಷೆಯನ್ನಾಗಿ ಪರಿಗಣಿಸಿರುವುದಿಲ್ಲ. ಆದ್ದರಿಂದ ಹಿಂದಿ ಭಾಷಾ ಉಪನ್ಯಾಸಕರ ಹುದ್ದೆ ಮಂಜೂರಾಗಿರುವುದಿಲ್ಲ.<br>ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಮಂಜೂರಾಗಿರುವುದಿಲ್ಲ. ಆದ್ದರಿಂದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಪದವಿ ಪೂರ್ವ ಕಾಲೇಜುಗಳಿಗೂ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡಿರುವುದಿಲ್ಲ. |
| **ಈ)** | ವಸತಿ ಶಿಕ್ಷಣ ನಿರ್ದೇಶನಾಲಯವನ್ನು ಸ್ಥಾಪಿಸಲು ಸರ್ಕಾರ ಚಿಂತಿಸಿದೆಯೇ; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ 80ನೇ ಆಡಳಿತ ಮಂಡಳಿಯ ಸಭೆಯಲ್ಲಿ ವಿಷಯ ಮಂಡಿಸಿದ್ದು, ಸಭೆಯು ಅಂಗೀಕರಿಸಿರುತ್ತದೆ ಹಾಗೂ ಸದರಿ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |
| **ಉ)** | ಹೊರ ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗೆ ವೇತನ ಪರಿಷ್ಕರಣೆ ಮಾಡಲು ಹಾಗೂ ಸೇವಾ ಭದ್ರತೆ ನೀಡಲು ಸರ್ಕಾರ ಕ್ರಮಕೈಗೊಳ್ಳುವುದೇ? | ವಸತಿ ಶಾಲೆಗಳಲ್ಲಿ ಹೊರಸಂಪನ್ಮೂಲ ಏಜೆನ್ಸಿ ಮೂಲಕ ಕಾರ್ಯನಿರ್ವಹಿಸುತ್ತಿರುವ ಹೊರಸಂಪನ್ಮೂಲ ಬೋಧಕ ಸಿಬ್ಬಂದಿಗಳ ವೇತನ ಪರಿಷ್ಕರಣೆ ಮಾಡಲು ಆಡಳಿತ ಮಂಡಳಿ ತೀರ್ಮಾನದಂತೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು, ಪ್ರಸ್ತುತ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.<br>ಮಾನ್ಯ ಉಚ್ಚನ್ಯಾಯಾಲಯದ ಪ್ರಕರಣ ಸಂಖ್ಯೆ: 8442/2020 ಮತ್ತು ಇತರೆ ಸಂಯೋಜಿತ ಪ್ರಕರಣದಲ್ಲಿನ ಅಂತಿಮ ಆದೇಶದಲ್ಲಿ ವಸತಿ ಶಾಲೆಗಳಲ್ಲಿ ಹೊರಸಂಪನ್ಮೂಲ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ಉಮಾದೇವಿ ಪ್ರಕರಣದನ್ವಯ ಅರ್ಹತೆ |

| | | |
|---|---|---|
| | | ಹೊಂದಿದ್ದಲ್ಲಿ ಸರ್ಕಾರದ ಹಂತದಲ್ಲಿ ತೀರ್ಮಾನ ಕೈಗೊಳ್ಳಬಹುದೆಂದು ನ್ಯಾಯಾಲಯವು ಆದೇಶಿಸಿದೆ. ಅದರಂತೆ ಸದರಿ ಪ್ರಕರಣದಲ್ಲಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಸೇವಾ ಭದ್ರತೆ ನೀಡುವ ಸಂಬಂಧ ಸಚಿವ ಸಂಪುಟಕ್ಕೆ ಪ್ರಸ್ತಾವನೆಯನ್ನು ಮಂಡಿಸಲು ಕ್ರಮವಹಿಸಲಾಗುತ್ತಿದೆ. |

ಸಕಇ 70 ಎಂಡಿಎಸ್ 2024

(ಡಾ||ಹೆಚ್.ಸಿ. ಮಹದೇವಪ್ಪ )
ಸಮಾಜ ಕಲ್ಯಾಣ ಸಚಿವರು